ಬೆವಿಕಂ

BESCOM

# ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ

(ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೊಳಪಟ್ಟಿದೆ)

ಕ್ರಮಾಂಕ: ಬೆವಿಕಂ/ಬಿಸಿ31/64/2022-23/ 320

ಸ್ವಾತಂತ್ರ್ಯದ ಅಮೃತ ಮಹೋತ್ಸವ

ಕಂಪನಿ ಕಾರ್ಯಾಲಯ,
ಕೆ.ಆರ್.ವೃತ್ತ,
ಬೆಂಗಳೂರು – 560001,
ದಿನಾಂಕ: 04 AUG 2022

## ಸುತ್ತೋಲೆ

ವಿಷಯ: ನಿಗದಿತ ಅವಧಿಯೊಳಗೆ ಕಛೇರಿಗೆ ಹಾಜರಾಗಲು ಹಾಗೂ ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಕಛೇರಿಯಲ್ಲಿ ಕಾರ್ಯನಿರ್ವಹಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಸುತ್ತೋಲೆ ಸಂಖ್ಯೆ: ಮುಕಾ: 4464335:2022 ದಿನಾಂಕ 25.07.2022.

*****

ಬೆವಿಕಂನ ಕಛೇರಿಗಳಲ್ಲಿ ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಲು ಹಾಗೂ ಕರ್ತವ್ಯದ ಅವಧಿಯಲ್ಲಿ ಕಾರ್ಯನಿಷ್ಠೆಯನ್ನು ತೋರಲು ಕಂಪನಿಯು ಈಗಾಗಲೇ ಸಾಕಷ್ಟು ಸುತ್ತೋಲೆಗಳಲ್ಲಿ ಸೂಚನೆಗಳನ್ನು ನೀಡಲಾಗಿದ್ದರೂ ಸಹ ಪಾಲಿಸದೆ ಇರುವುದು ಕಂಡುಬಂದಿರುತ್ತದೆ.

ಬಳಕೆದಾರರು/ಸಾರ್ವಜನಿಕರು ದೂರದ ಸ್ಥಳಗಳಿಂದ ಬೆವಿಕಂ ಕಛೇರಿಯಲ್ಲಿನ ತಮ್ಮ ಕಾರ್ಯಗಳಿಗೆ ಬೆಳಗ್ಗೆ ನಿಗದಿತ ಅವಧಿಗೆ ಬೆವಿಕಂನ ಕಛೇರಿಗಳಿಗೆ ಭೇಟಿ ನೀಡಿದಾಗ, ಬಹುತೇಕ ಕಛೇರಿಗಳಲ್ಲಿ ಸಿಬ್ಬಂದಿಗಳು/ಅಧಿಕಾರಿಗಳು ಕಛೇರಿಗೆ ಹಾಜರಾಗಿಲ್ಲದೇ ಇರುವ ಕಾರಣ ಸಾಮಾನ್ಯ ಜನರು ಬವಣೆ ಪಡುವಂತಾಗಿದೆ.

ಈ ಹಿನ್ನಲೆಯಲ್ಲಿ, ಕಛೇರಿಯ ಪ್ರಾರಂಭದ ಸಮಯ ಬೆಳಗ್ಗೆ 10.00 ಗಂಟೆಗೆ ಕಡ್ಡಾಯವಾಗಿ ಹಾಜರಾಗುವುದು ಹಾಗೂ ಕಛೇರಿ ಅವಧಿ ಪೂರ್ಣವಾಗುವವರೆಗೆ ತಮಗೆ ನಿಗದಿಪಡಿಸಿದ ಸ್ಥಾನದಲ್ಲಿ ಇದ್ದು, ಕರ್ತವ್ಯ ನಿರ್ವಹಿಸತಕ್ಕದ್ದು. ಕಛೇರಿ ಅವಧಿಯಲ್ಲಿ ನೌಕರರು/ಅಧಿಕಾರಿಗಳು ಅನ್ಯ ಕರ್ತವ್ಯದ ಮೇರೆಗೆ ತೆರಳಬೇಕಾಗಿದ್ದಲ್ಲಿ, ಚಲನ-ವಲನ ವಹಿಯಲ್ಲಿ (Movement Register) ಸಮಂಜಸವಾದ ಕಾರಣವನ್ನು ನಮೂದಿಸಿ, ಮೇಲಾಧಿಕಾರಿಗಳ ಪೂರ್ವಾನುಮತಿಯನ್ನು ಪಡೆಯತಕ್ಕದ್ದು. ನಿಗದಿತ ಕಾಲಾವಧಿಗಿಂತ ವಿಳಂಭವಾಗಿ ಹಾಜರಾಗುವ ಹಾಗೂ ಕಛೇರಿ ಅವಧಿಯಲ್ಲಿ ಸ್ವಸ್ಥಾನದಲ್ಲಿ ಇಲ್ಲದ/ಮೇಲಾಧಿಕಾರಿಗಳ ಅನುಮತಿ ಪಡೆದಿಲ್ಲದ ನೌಕರರು/ಅಧಿಕಾರಿಗಳ ವಿರುದ್ಧ ಕಛೇರಿ ಮುಖ್ಯಸ್ಥರು ಸೂಕ್ತ ಶಿಸ್ತು ಕ್ರಮ ಜರುಗಿಸತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿಸಲ್ಪಟ್ಟಿದೆ

ಪ್ರಶಾಂತಕುಮಾರ್ ಎಸ್.ಬಿ, ಕ.ಆ.ಸೇ
ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಬೆ.ವಿ.ಕಂ., ಬೆಂಗಳೂರು.

--2

**ಪ್ರತಿಯನ್ನು:-**

1. ಪೋಲಿಸ್ ಅಧೀಕ್ಷಕರು, ಜಾಗೃತ ದಳ, ಕಂಪನಿ ಕಾರ್ಯಾಲಯ, ಬೆವಿಕಂ, ಬೆಂಗಳೂರು.
2. ಕಂಪನಿ ಕಾರ್ಯದರ್ಶಿ, ಕಂಪನಿ ಕಾರ್ಯಾಲಯ, ಬೆವಿಕಂ, ಬೆಂಗಳೂರು.
3. ಎಲ್ಲಾ ಮುಖ್ಯ ಪ್ರಧಾನ ವ್ಯವಸ್ಥಾಪಕರು, ಕಂಪನಿ ಕಾರ್ಯಾಲಯ, ಬೆ.ವಿ.ಕಂ, ಬೆಂಗಳೂರು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕಾ ಮತ್ತು ಪಾ ವಲಯ, ಬೆವಿಕಂ.
5. ಪ್ರಧಾನ ವ್ಯವಸ್ಥಾಪಕರು, ಕಂಪನಿ ಕಾರ್ಯಾಲಯ, ಬೆ.ವಿ.ಕಂ, ಬೆಂಗಳೂರು.
6. ಎಲ್ಲಾ ಲೆಕ್ಕನಿಯಂತ್ರಣಾಧಿಕಾರಿಗಳು, ಕಾ ಮತ್ತು ಪಾ ವಲಯ, ಬೆವಿಕಂ.
7. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾ. ಮತ್ತು ಪಾ., ಬೆವಿಕಂ.
8. ಎಲ್ಲಾ ಅಧಿಕಾರಿಗಳು, ಕಂಪನಿ ಕಾರ್ಯಾಲಯ, ಬೆ.ವಿ.ಕಂ., ಬೆಂಗಳೂರು.
9. ಎಲ್ಲಾ ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕಾ. ಮತ್ತು ಪಾ., ಬೆವಿಕಂ.
10. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆವಿಕಂ.
11. ಎಲ್ಲಾ ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನೆ/(ಆಂ.ಪ), ಬೆವಿಕಂ.
12. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ, ಬೆವಿಕಂ.
13. ಆಪ್ತ ಕಾರ್ಯದರ್ಶಿಗಳು: ವ್ಯ.ನಿ/ನಿ(ತಾಂ.)/ನಿ(ಹ), ಕಂಪನಿ ಕಾರ್ಯಾಲಯ, ಬೆವಿಕಂ, ಬೆಂಗಳೂರು.
14. ಮುಖ್ಯ ಗುಮಸ್ತರು, ಕಂಪನಿ ಕಾರ್ಯಾಲಯ, ಬೆವಿಕಂ, ಬೆಂಗಳೂರು.
15. ಮುಖ್ಯ ಕಡತ.

**ಪ್ರತಿಗಳು ಮಾಹಿತಿಗಾಗಿ:-**

1. ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ, ಆನಂದರಾವ್ ವೃತ್ತ, ಬೆಂಗಳೂರು.
2. ಅಧ್ಯಕ್ಷರು, ಕೆಇಬಿ, ಇಂಜಿನಿಯರುಗಳ ಸಂಘ, ಆನಂದರಾವ್ ವೃತ್ತ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ.ನಿ ನೌಕರರ ಸಂಘ/ಕ.ವಿ.ಮಂ ಇಂಜಿನಿಯರುಗಳ ಸಂಘ/ಡಿಪ್ಲೊಮಾ ಇಂಜಿನಿಯರುಗಳ ಸಂಘ/ಕ.ವಿ.ಪ್ರ.ನಿ.ನಿ., ಲೆಕ್ಕಾಧಿಕಾರಿಗಳ ಸಂಘ/ಕ.ವಿ.ಪ್ರ.ನಿ.ನಿ., ಪ.ಜಾತಿ ಮತ್ತು ಪ.ಪಂಗಡಗಳ ಕಲ್ಯಾಣ ಸಂಸ್ಥೆ, ಕವಿಪ್ರನಿನಿ/ಎಸ್ಕಾಂ ಪ.ಜಾತಿ/ಪ.ಪಂಗಡ ಅಧಿಕಾರಿಗಳ ಸಂಘ ಬೆಂಗಳೂರು ರವರುಗಳ ಮಾಹಿತಿಗಾಗಿ.